826 (1013) ಶ್ರೀ ಅಂಜನಾಮೂರ್ತಿ (ನೆಲಮಂಗಲ) ಮಾನ್ಯ ಗೃಹ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ನೆಲಮಂಗಲ ಪಟ್ಟಣದಲ್ಲಿರುವ ಪೊಲೀಸ್ ವಸತಿಗೃಹಗಳೆಲ್ಲವು ದುಸ್ಥಿತಿಯಲ್ಲಿರುವುದರಿಂದ ಅವು ಬಿದ್ದು, ಸಾವು ನೋವು ಉಂಟಾಗುವ ಸಾಧ್ಯತೆಗಳಿರುವುದು ನಿಜವಲ್ಲವೇ ?

ಆ) ಹಾಗಿದ್ದಲ್ಲಿ, ಈ ವಸತಿ ಗೃಹಗಳನ್ನು ದುರಸ್ತಿಗೊಳಿಸಲು ಅಥವಾ ನೂತನವಾಗಿ ವಸತಿ ಗೃಹಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ?

ಶ್ರೀ ಎಂ ಪಿ ಪ್ರಕಾಶ್ (ಗೃಹ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) –

ಅ) ನೆಲಮಂಗಲ ಪಟ್ಟಣದಲ್ಲಿರುವ ಪೊಲೀಸ್ ವಸತಿ ಗೃಹಗಳು ಹಳೆಯದಾಗಿದ್ದರೂ ವಾಸಿಸಲು ಯೋಗ್ಯವಾಗಿರುತ್ತವೆ ಆದರೆ ಈ ಕಟ್ಟಡಗಳಿಗೆ ದುಸ್ತಿಯ ಅವಶ್ಯಕತೆ ಇರುತ್ತದೆ

ಆ) ಪೊಲೀಸ್ ವಸತಿ ಗೃಹಗಳನ್ನು ದುರಸ್ತಿ ಮಾಡಲು ಈಗಾಗಲೇ ರೂ 14 00 ಲಕ್ಷಗಳನ್ನು ಪೊಲೀಸ್ ಅಧೀಕ್ಷಕರು, ಬೆಂಗಳೂರು ಜಿಲ್ಲೆ ರವರಿಗೆ ಬಿಡುಗಡೆ ಮಾಡಿದ್ದು, ಅವಶ್ಯಕ ತುರ್ತು ದುರಸ್ತಿ ಕಾಮಗಾರಿ ಮಾಡಲು ಸೂಚಿಸಲಾಗಿದೆ ಅದರಂತೆ ಆದ್ಯತೆ ಮೇರೆಗೆ ದುರಸ್ತಿ ಕಾರ್ಯ ಪ್ರಗತಿಯಲ್ಲಿರುತ್ತದೆ ಮೇಲಿನ ಕಾಮಗಾರಿಯನ್ನು ಕೂಡ ಕೈಗೆತ್ತಿಕೊಳ್ಳುವಂತೆ ಎಸ್ ಪಿ , ಬೆಂಗಳೂರು ರವರಿಗೆ ತಿಳಿಸಲಾಗಿದೆ

827 (1014) ಶ್ರೀ ಅಂಜನಾಮೂರ್ತಿ (ನೆಲಮಂಗಲ) ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ರಾಜ್ಯದಲ್ಲಿ ಪ್ರವಾಸಿಗರನ್ನು ಸೆಳೆಯುವ ವೃತ್ತಿ ನಿರತ ಮತ್ತು ಸ್ನೇಹಯುಕ್ತರಾದ ಮಾರ್ಗದರ್ಶಕರನ್ನು ಹಾಗೂ ಕಾರ್ಯಾಚರಣೆದಾರರ ಹೊಸ ಪಡೆಯನ್ನು ನೇಮಿನಲು ಬಿಡುಗಡೆ ಮಾಡಲಾದ ಹಾಗೂ ಖರ್ಚು ಮಾಡಿದ ಹಣವೆಷ್ಟು

ಆ) ವಿವಿಧ ಭಾಷೆಯ ಕಲೆ ಸಂಸ್ಕೃತಿ ಮತ್ತು ಇತಿಹಾಸದ ಬಗ್ಗೆ ಎಷ್ಟು ಜನ ಅರಿವು ಉಳ್ಳ ಮಾರ್ಗದರ್ಶಕರನ್ನು ನೇಮಕ ಮಾಡಲಾಗಿದೆ,

ಇ) ಸ್ಥಳೀಯ ಯುವಕರಿಗೆ ಉದ್ಯೋಗವಕಾಶ ಕಲ್ಪಿಸಲು ಆಯವ್ಯಯದಲ್ಲಿ ತಿಳಿಸಿರುವಂತೆ 40 ಕೋಟಿ ರೂ ಗಳನ್ನು ಬಿಡುಗಡೆ ಮಾಡಲಾಗಿದೆಯೇ (ಮೂರ್ಣ ಮಾಹಿತಿ ನೀಡುವುದು) ?

ಶ್ರೀ ಬಿ ಶ್ರೀರಾಮುಲು (ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು) –

ಅ) ಪ್ರಸ್ತುತ ಸಾಲಿನಲ್ಲಿ ಬೆಂಗಳೂರಿನಲ್ಲಿ ಮಾರ್ಗದರ್ಶನ ತರಬೇತಿ ಶಿಬಿರ ಏರ್ಪಡಿಸಲು ಕ್ರಮ ಕೈಗೊಳ್ಳಲಾಗಿದೆ ಇದಕ್ಕಾಗಿ ರೂ 65,000–00 ವೆಚ್ಚವಾಗಲಿದೆ

ಆ) ಪ್ರವಾಸೋದ್ಯಮ ಇಲಾಖೆಯಿಂದ ಮಾರ್ಗದರ್ಶಕರನ್ನು ನೇಮಕ ಮಾಡಲಾಗುತ್ತಿಲ್ಲ ಆದರೆ ತರಬೇತಿ ಹೊಂದಿದ 710 ಮಾರ್ಗದರ್ಶಿಗಳು ವಿವಿಧ ಪ್ರವಾಸೋದ್ಯಮ ಸ್ಥಳಗಳಲ್ಲಿ ಮಾರ್ಗದರ್ಶನ ಸೇವೆ ನಲ್ಲಿಸುತ್ತಿದ್ದಾರೆ

ಇ) ಉದ್ಯೋಗಾವಕಾಶ ಕಲ್ಪಿಸಲು ಆಯವ್ಯಯದಲ್ಲಿ ಅನುದಾನ ಒದಗಿಸಿರುವುದಿಲ್ಲ ಆದ್ದರಿಂದ ಬಿಡುಗಡೆ ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ

828 (1015) ಶ್ರೀ ಅಂಜನಾಮೂರ್ತಿ (ನೆಲಮಂಗಲ) ಮಾನ್ಯ ಮುಖ್ಯಮಂತ್ರಿಯವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ನೆಲಮಂಗಲ ಪಟ್ಟಣದಲ್ಲಿ ಸುಮಾರು 35000 ಸಂಖ್ಯೆಗಿಂತ ಮೇಲ್ಪಟ್ಟಿರುವುದರಿಂದ ಕುಡಿಯುವ ನೀರಿನ ಅಭಾವವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಈ ಪಟ್ಟಣದಲ್ಲಿ ಒಳಚರಂಡಿ ವ್ಯವಸ್ಥೆ ಇಲ್ಲದೆಯೇ ನಾಗರೀಕರು ಬಹಳಷ್ಟು ಕಷ್ಟ ಅನುಭವಿಸುತ್ತಿರುವುದು ನಿಜವಲ್ಲವೇ ,

ಇ) ಹಾಗಿದ್ದಲ್ಲಿ, ಒಳಚರಂಡಿ ಮಂಡಳಿಯು ಸುಮಾರು 95 ಕೋಟಿ ಅಂದಾಜು ಪಟ್ಟಿಯನ್ನು ತಯಾರಿಸಿ ಸರ್ಕಾರಕ್ಕೆ ಕಳುಹಿಸಿದ್ದು, ಈಗ ಯಾವ ಹಂತದಲ್ಲಿದೆ ?

ಈ) ಈ ಪಟ್ಟಣದಲ್ಲಿರುವ ನೀರಿನ ಅಭಾವವನ್ನು ತಪ್ಪಿಸಲು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಕೈಗೊಳ್ಳಲು ಸರ್ಕಾರ ಯಾವ ಯಾವ ಕ್ರಮ ಕೈಗೊಳ್ಳಲಿದೆ ?